ಚುಟುಕು ಸುದ್ದಿ

ಮಲ್ಲಿಕಾರ್ಜುನ ಸ್ವಾಮಿಯ 10ನೇ ವರ್ಷದ ಪುಣ್ಯ ಸ್ಮರಣೆ

ಗಂಗಾವತಿ: ತಾಲೂಕಿನ ಮರಳಿ ಗ್ರಾಮದ ಹತ್ತಿರವಿರುವ ರುದ್ರೇಶ್ ನಗರದಲ್ಲಿ ಎಂ.ಎಸ್.ಎಂ.ಎಸ್. ಕಾಲೇಜ್ ಆವರಣದಲ್ಲಿ ಇರುವ 63 ಶಿಲಾ ಕಂಬಗಳ ದೇವಸ್ಥಾನದಲ್ಲಿ ಶ್ರೀಮನ್ ನಿರಂಜನ ಪ್ರಣವ ಸ್ವರೂಪಿ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳ ಹತ್ತನೇ ವರ್ಷದ ಪುಣ್ಯ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಹರಳಹಳ್ಳಿ ಶ್ರೀರೇವಣಸಿದ್ದೇಶ್ವರ ಸ್ವಾಮಿಗಳು ಉದ್ಘಾಟಿಸಿದರು.

ನಂತರ ಎಂ.ಎಸ್.ಎಂ.ಎಸ್. ಗ್ರೂಪ್ ಅಧ್ಯಕ್ಷರಾದ ಮತ್ತು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಎಚ್.ಎಂ. ಸಿದ್ದರಾಮಯ್ಯ ಸ್ವಾಮಿ ಮಾತನಾಡಿ, ಶ್ರೀಮಲ್ಲಿಕಾರ್ಜುನ ಸ್ವಾಮಿಗಳು ಗಂಗಾವತಿಯಿಂದ ರುದ್ರೇಶ್ವರ ನಗರಕ್ಕೆ 1994/95 ರಲ್ಲಿ ಬಂದು ಈ ಭಾಗದ 38 ಹಳ್ಳಿಗಳಿಗೆ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕವಾಗಿ, ಅಕ್ಷರ ದಾಸೋಹ, ಅನ್ನದಾಸೋಹ ಮುಖಾಂತರ ಶಿಕ್ಷಣ ವಿದ್ಯಾಲಯವನ್ನು ಸ್ಥಾಪಿಸಿದರು. ಎಂ.ಎಸ್.ಎಂ.ಎಸ್. ವಿದ್ಯಾಲಯದಲ್ಲಿ ಪಿಯುಸಿ, ಶಿಕ್ಷಣ (ಬಿ.ಇಡಿ.),ಪದವಿ, ತಾಂತ್ರಿಕ ಶಿಕ್ಷಣ, ಹೀಗೆ ಶಿಕ್ಷಣವನ್ನು ಮುಂದುವರಿಸಿಕೊಂಡು ಶಿಕ್ಷಣ ಕ್ಷೇತ್ರದಲ್ಲಿ ಹೊಸ ಕ್ರಾಂತಿಯನ್ನು ಸೃಷ್ಟಿ ಮಾಡಿದವರು ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು. ಈಗಾಗಲೇ ಶಿಕ್ಷಣ ಸಂಸ್ಥೆಯಲ್ಲಿ 12 ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಪ್ರಗತಿಯನ್ನು ಕಾಣುತ್ತಿದ್ದಾರೆ. ಪೂಜ್ಯರು ರಾಜ್ಯಾದ್ಯಂತ ಈಗಾಗಲೇ ಎಂಟು ಮಠಗಳನ್ನು ಕಟ್ಟಿ ಹೋಗಿದ್ದಾರೆ, ಅವರು ಸಾವಯವ ಕೃಷಿ ಅಧ್ಯಯನದ ಕುರಿತು ಕೃಷಿಜ್ಞಾನ ಪ್ರದೀಪಿಕೆ ಪುಸ್ತಕವನ್ನು ಬಿಡುಗಡೆ ಮಾಡಿದ್ದರು. ರಾಜ್ಯ ಸರ್ಕಾರ 40,000 ಪುಸ್ತಕಗಳನ್ನು ಖರೀದಿ ಮಾಡಿದ್ದು, ಕೃಷಿ ಮೇಲೆ ಇರುವ ಅವರ ಕಾಳಜಿಯನ್ನು ಇದು ಎತ್ತಿ ತೋರಿಸುತ್ತದೆ. ಶಿಕ್ಷಣದಲ್ಲಿ ಅವರ ಕನಸಿನ ಯೋಜನೆ ಇಂದು ಸಾಕಾರ ಗೊಂಡಿದೆ ಎಂದು ಎಂ. ಎಸ್.ಎಂ.ಎಸ್. ಗ್ರೂಪ್ ಅಧ್ಯಕ್ಷ ಬಿಜೆಪಿ ಹಿರಿಯ ಮುಖಂಡ ಎಚ್.ಎಂ. ಸಿದ್ದರಾಮಯ್ಯ ಸ್ವಾಮಿ ಹೇಳಿದರು. ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರಾದ ಮಹಾದೇವಸ್ವಾಮಿ, ಕಾಲೇಜ್ ಪ್ರಾಂಶುಪಾಲರಾದ ಅಬ್ದುಲ್ ಖಾದರ್ ಜಿಲಾನಿ, ಮುಖ್ಯೋಪಾಧ್ಯಾಯರಾದ ಮೌನೇಶ್, ಶರಣಪ್ಪ, ಮ್ಯಾನೇಜ್ಮೆಂಟ್ ಕಮಿಟಿ ಸಿ.ಇ.ಓ. ವಿರುಪಾಕ್ಷಯ್ಯ ಸ್ವಾಮಿ, ಪಂಚಾಕ್ಷರಯ್ಯ ಸ್ವಾಮಿ, ಪಾರ್ವತಿ ಸಿದ್ದರಾಮಯ್ಯ ಸ್ವಾಮಿ, ಯಶೋಧ ಹಾಗೂ ಚನ್ನ ಮಲ್ಲಿಕಾರ್ಜುನ ಸ್ವಾಮಿ ಸೇರಿದಂತೆ ನೂರಾರು ವಿದ್ಯಾರ್ಥಿಗಳು, ಭಕ್ತರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಅಭಿನಂದನಾ ಗ್ರಂಥ ಹೊರ ತಂದಿರುವುದು ಅರ್ಹರಿಗೆ ಸಂದ ಗೌರವ

ವಿದ್ಯಾರ್ಥಿ ಹಿತಾಸಕ್ತಿ, ಉತ್ತಮ ಆಡಳಿತ ಮೇಟಿಯವರ ಕೊಡುಗೆ: ಕೆ.ವಿ.ಪ್ರಸಾದ

ಉದಯಕಾಲ ನ್ಯೂಸ್

ಕೊಪ್ಪಳ: ಕಾಲೇಜಿನ ಬೋಧಕರ, ಬೋಧಕೇತರರ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗುಣವಾಗಿ ಉತ್ತಮ ಆಡಳಿತ ನಿರ್ವಹಿಸಿದ್ದು ಪ್ರೊ.ತಿಮ್ಮಾರಡ್ಡಿ ಮೇಟಿಯವರ ಕಾರ್ಯದಕ್ಷತೆಗೆ ಹಿಡಿದ ಕನ್ನಡಿ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಸಚಿವ ಕೆ.ವಿ.ಪ್ರಸಾದ್ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಒಳ ಆವರಣದಲ್ಲಿ ಬುಧವಾರ ಪ್ರೊ.ತಿಮ್ಮಾರಡ್ಡಿ ಮೇಟಿಯವರ ಸೇವಾನಿವೃತ್ತಿ ಪ್ರಯುಕ್ತ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭ ಹಾಗೂ ಮೇಟಿಯವರ ಕುರಿತ ಅಪ್ಪಟ ಅಪರಂಜಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೊಪ್ಪಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪದವಿ ಮಹಾವಿದ್ಯಾಲಯಗಳಲ್ಲೇ ಅತ್ಯಧಿಕ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿದ ಕಾಲೇಜೇಂದರೆ ಕೊಪ್ಪಳದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು. ಆಡಳಿತದಲ್ಲಿ ಅತ್ಯಂತ ನಿಪುಣತೆ ಮತ್ತು ಚಾಣಾಕ್ಷತೆಯನ್ನು ಪಡೆದಿದ್ದರು. ಕೊಪ್ಪಳ ವಿಶ್ವವಿದ್ಯಾಲಯದೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದ್ದರು ಎಂದರು.

ವಿಶ್ವವಿದ್ಯಾಲಯ ಮತ್ತು ಆಡಳಿತ ವಿಷಯಕ್ಕೆ ಸಂಬಂಧಪಟ್ಟಂತೆ ಇವರು ನಮಗೆ ಉತ್ತಮ ಸಲಹೆ ಸೂಚನೆ ಮಾರ್ಗದರ್ಶನ ನೀಡುತ್ತಿದ್ದರು. ಇಂಥಹ ಅಪಾರ ಅನುಭವಿ ತಿಮ್ಮಾರಡ್ಡಿ ಮೇಟಿ ಅವರು ವಯೋಸಹಜ ನಿವೃತ್ತಿಯನ್ನು ಹೊಂದುತ್ತಿರುವ ಈ ಸಂದರ್ಭದಲ್ಲಿ ಅವರ ಬದುಕಿನ

ಸಾಧನೆಯ ಕುರಿತು ಅಭಿನಂದನ ಗ್ರಂಥವನ್ನು ಹೊರ ತರುತ್ತಿರುವ ಅತ್ಯಂತ ಸಂತಸವಾಗಿದೆ. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಬಿ ಕೆ ರವಿ ಅವರು ಅನ್ಯ ಕಾರ್ಯ ನಿಮಿತ್ತ ಹೋಗಿರುವುದರಿಂದ ಅವರ ಪರವಾಗಿ ಕುಲ ಸಚಿವರಾಗಿ ಕಾರ್ಯಕ್ರಮದ ಉದ್ಘಾಟನೆ ಮಾಡಿದ್ದು ನನಗೆ ಅತೀವ ಸಂತಸ ತಂದಿದೆ ಎಂದು ತಿಳಿಸಿದರು.

ಅಪ್ಪಟ ಅಪರಂಜಿ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ ಮಾತನಾಡಿದ ಹಗರಿಬೊಮನಹಳ್ಳಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಕೆ.ವೆಂಕಟೇಶ, ದೇಶಿಯ ಸೊಗಡಿನಿಂದ ಬಂದ ಪ್ರತಿಭೆ ತಿಮ್ಮಾರಡ್ಡಿ ಮೇಟಿ. ಅಪ್ಪಟ ಗ್ರಾಮೀಣ ಕುಟುಂಬದಲ್ಲಿ ಬೆಳೆದು ಬಂದ ಇವರು ಬದುಕಿನಲ್ಲಿ ಬಡತನ, ಅನೇಕ ಕಷ್ಟಕಾರ್ಪಣ್ಯಗಳು, ನೋವು-ನಲಿವುಗಳೆಲ್ಲವನ್ನು ಸಮಾನವಾಗಿ ಹಂಚಿಕೊಂಡಂತವರು ಎಂದು ಶ್ಲಾಘಿಸಿದರು.

ಆ ಕಾರಣಕ್ಕಾಗಿಯೇ ಚೆನ್ನಾಗಿ ಓದಿಕೊಂಡು ವಾಣಿಜ್ಯ ವಿಭಾಗದ ಪ್ರಾಧ್ಯಾಪಕರಾಗಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕೆಲಸಕ್ಕೆ ಸೇರಿ ಕೊಪ್ಪಳದಂತ ಈ ಬೃಹತ್ ವಿದ್ಯಾರ್ಥಿಗಳಿರುವ ಕಾಲೇಜಿನ ಪ್ರಾಂಶುಪಾಲರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಎಲ್ಲರೊಂದಿಗೆ ಪ್ರೀತಿಯಿಂದ ಬೆರೆತುಕೊಳ್ಳುವ ಇವರ ಮನಸ್ಸಿನಲ್ಲಿ ಯಾವುದೇ ಬಗೆಯ ನಂಜಿನ ಗುಣ ಇರಲಿಲ್ಲ. ಸದಾ ಶಿಸ್ತು ಬದ್ಧ ಜೀವನ ಇವರದಾಗಿತ್ತು. ಅನೇಕ ಯುವ ಪ್ರಾಧ್ಯಾಪಕರಿಗೆ ಇವರು ಪ್ರೇರಣೆಯಾಗಿದ್ದಾರೆ. ಇವರ ಸಾಧನೆಯ ನೋಟವನ್ನು ಪರಿಚಯಿಸುವ ದೃಷ್ಟಿಯಿಂದ ಅವರ ಕುರಿತಾಗಿ ಅಭಿನಂದನ ಗ್ರಂಥವನ್ನು ಹೊರ ತರುತ್ತಿರುವುದು ಅತ್ಯಂತ ಶ್ಲಾಘನೀಯವಾದುದು ಮತ್ತು ಅರ್ಹ ವ್ಯಕ್ತಿಗೆ ಸಂದ ಗೌರವವಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಡಾ. ಗವಿಸಿದ್ದಪ್ಪ ಮುತ್ತಾಳ, ಉಮೇಶ್ ಅಂಗಡಿ, ಮಹಾಂತೇಶ್ ಪಾಟೀಲ್ ಮೈನಳ್ಳಿ, ಕೇಶವರಡ್ಡಿ ಮಾದಿನೂರ್, ಬಸವರಡ್ಡಿ ಹಳ್ಳಿಕೇರಿ, ಕೊಪ್ಪಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವ್ಯವಸ್ಥಾಪಕ ಮಹಾಂತೇಶ್, ಸೋಮರಡ್ಡಿ ಅಳವಂಡಿ, ಸರೋಜಾ ಮೇಟಿ, ಶಂಕರಗೌಡ ಹಿರೇಗೌಡ್ರ, ಡಾಕ್ಟರ್ ಹನುಮಂತ ಕಲ್ಮನಿ, ವಿನೋದ್ ಚಂದ್ ಪೀಟರ್, ಪ್ರಕಾಶಗೌಡ , ಮಂಜುನಾಥ್ ಗೊಂಡವಾಳ, ಮಂಜುನಾಥ್ ಆರೆಂಟನೂರ,

ಮಾರುತೇಶ್, ಪ್ರಕಾಶ್ ಬಳ್ಳಾರಿ, ಶಿವಬಸಪ್ಪ ಮಸ್ಕಿ, ಡಾ.ಕನಕೇಶ ಮೂರ್ತಿ,ಎಂ.ಕೆ.ಇಬ್ರಾಹಿಂ ಮತ್ತಿತರರು ಇದ್ದರು.

ಬಸವರಾಜ ಕರುಗಲ್ ಪ್ರಾಸ್ತಾವಿಕ ಮಾತನಾಡಿದರು. ಪ್ರಕಾಶಗೌಡ ಎಸ್.ಯು. ಆಶಯ ನುಡಿಗಳನ್ನಾಡಿದರು. ಚೈತ್ರಾ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಗೀತಾ ಬನ್ನಿಕೊಪ್ಪ ಸ್ವಾಗತಿಸಿದರು. ಮಂಜುನಾಥ ಆರೆಂಟನೂರ, ಮಹಾಂತೇಶ ನೆಲಾಗಣಿ ನಿರೂಪಿಸಿದರು.

ವರ್ಗಾವಣೆಗೊಂಡ ಸಿಬ್ಬಂದಿಗೆ ಸನ್ಮಾನ: ಸಮಾರಂಭದಲ್ಲಿ ಕೊಪ್ಪಳ ಕಾಲೇಜಿನಿಂದ ವರ್ಗಾವಣೆಗೊಂಡ ಅಧೀಕ್ಷಕ ರವಿಕಿರಣ್ ರಾಠೋಡ, ಡಾಟಾ ಎಂಟ್ರಿ ಆಪರೇಟರ್ ಜೈಪ್ರಕಾಶ್ ಬಿರಾದಾರ್ ಅವರನ್ನು ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಸನ್ಮಾನಿಸಿ ಗೌರವಿಸಿದರು. ಸೇವಾ ನಿವೃತ್ತಿ ಹೊಂದಿದ ಪ್ರೊ.ತಿಮ್ಮಾರಡ್ಡಿ ಮೇಟಿಯವರನ್ನು ಕಾಲೇಜಿನ ಸಿಬ್ಬಂದಿ, ಬಂಧುಮಿತ್ರರು ಸತ್ಕರಿಸಿದರು.

ಶಿವಮ್ಮನಿಗೆ ರಾಜ್ಯ ಉತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕಾರ

ಉದಯಕಾಲ ನ್ಯೂಸ್

ಗಂಗಾವತಿ: ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಕೇಂದ್ರ ಸಂಘ (ರಿ) ಬೆಂಗಳೂರು ಇವರು ನೀಡಲ್ಪಡುವ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯು ಗಂಗಾವತಿ ತಾಲೂಕಿನ ಹೆಬ್ಬಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶಿವಮ್ಮ ಇವರಿಗೆ ನೀಡಲಾಗಿದೆ.

ಈ ಪ್ರಶಸ್ತಿಯನ್ನು ಬೆಂಗಳೂರಿನ ಅರಮನೆಯ ರಸ್ತೆಯಲ್ಲಿರುವ ಕೊಂಡಜ್ಜಿ ಬಸಪ್ಪ ಭವನದಲ್ಲಿ ಜುಲೈ-23 ರಂದು ನೀಡಲಾಗಿದೆ. ಈ ಪ್ರಶಸ್ತಿಗೆ ಸದರಿಯವರನ್ನು ಆಯ್ಕೆ ಮಾಡಲು ಗಂಗಾವತಿಯ ರಾಷ್ಟ್ರ ಪ್ರಶಸ್ತಿ ಪುರಸ್ಕೃತರು ಹಾಗೂ ಸಂಘದ ಗುಲ್ಬರ್ಗಾ ವಿಭಾಗದ ಉಪಾಧ್ಯಕ್ಷರಾದ ಖಾದರಸಾಬ್ ಹುಲ್ಲೂರುರವರು ಶಿಫಾರಸ್ಸು ಮಾಡಿದ್ದರು.

ಈ ಪ್ರಶಸ್ತಿ ಸಮಾರಂಭದ ಅಧ್ಯಕ್ಷತೆಯನ್ನು ಮಾಜಿ ಸಚಿವರು, ರಾಜ್ಯದ ಸ್ಕೌಟ್ ಮತ್ತು ಗೈಡ್ಸ್ ಪ್ರಧಾನ ಆಯುಕ್ತರಾದ ಪಿ.ಜಿ.ಆರ್. ಸಿಂಧ್ಯಾರವರು ವಹಿಸಿದ್ದರು,

ಮಾಜಿ ಸಚಿವರು ಹಾಗೂ ರಾಜ್ಯದ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಎಚ್.ಎಂ.ರೇವಣ್ಣರವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷರಾದ ಸಿ.ಎಸ್.ಷಡಕ್ಷರಿ ಮತ್ತು ಕೇಂದ್ರ ಸಂಘದ ಅಧ್ಯಕ್ಷರಾದ ಕೆ. ಕೃಷ್ಣಪ್ಪ, ಕಾರ್ಯದರ್ಶಿಗಳಾದ ವಿ.ಪಿ. ಕುಮಾರ್ ಸ್ವಾಮಿ ಇವರ ಸಮ್ಮುಖದಲ್ಲಿ ಕೊಪ್ಪಳ ಜಿಲ್ಲೆಯಿಂದ ಶಿವಮ್ಮ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಪ್ರಶಸ್ತಿ ಪಡೆದ ಶಿವಮ್ಮರವರಿಗೆ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಸ್.ಎಸ್. ಬಿರಾದಾರ್, ಡಯಟ್ ಮುನಿರಾಬಾದಿನ ಉಪನಿರ್ದೇಶಕರಾದ ದೊಡ್ಡಬಸಪ್ಪ ನೀರಲಕೇರಿ, ತಾಲೂಕು ಶಿಕ್ಷಣ ಅಧಿಕಾರಿಗಳಾದ ವೆಂಕಟೇಶ ರಾಮಚಂದ್ರಪ್ಪನವರು, ಬಿ.ಆರ್.ಸಿ ಅಧಿಕಾರಿಗಳಾದ ಮಂಜುನಾಥ ರವರು, ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷರು ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಶರಣೇಗೌಡರ ಪೊಲೀಸ್ ಪಾಟೀಲ್, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಹನುಮಂತಪ್ಪ ರವರು, ಸಂಘದ ಮಾಜಿ ಅಧ್ಯಕ್ಷರಾದ ಚಾಂದಪಾಷ, ಎಲ್ಲಾ ಶಿಕ್ಷಣ ಸಂಯೋಜಕರು, ಎಲ್ಲಾ ಬಿ.ಆರ್.ಪಿ ಗಳು, ಚಿಕ್ಕಜಂತಕಲ್ ಕ್ಲಸ್ಟರ್‌ನ ಅಧಿಕಾರಿಗಳಾದ ಸಿ.ಆರ್.ಪಿ ಸಚ್ಚಿದಾನಂದ, ಗ್ರಾಮ ಪಂಚಾಯಿತಿ ಮಾಜಿ (ಢಣಾಪುರ) ಅಧ್ಯಕ್ಷರಾದ ಶಫೀ ಹಾಗೂ ಸದಸ್ಯರು ಹೆಬ್ಬಾಳ ಸ.ಹಿ.ಪ್ರಾ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ವೀರಪ್ಪ ಬಡಿಗೇರ್ ಹಾಗೂ ಸರ್ವ ಸದಸ್ಯರು, ಶಿಕ್ಷಣ ಪ್ರೇಮಿ ಶಾಂತಕುಮಾರ್ ಹಿರೇಮಠ, ಶಾಲೆಯ ಎಲ್ಲಾ ಶಿಕ್ಷಕ ವೃಂದದವರು, ಮುದ್ದು ಮಕ್ಕಳು, ಊರಿನ ಹಿರಿಯರು, ಹಳೆಯ ವಿದ್ಯಾರ್ಥಿಗಳು, ಅಭಿನಂದನೆಗಳು ಸಲ್ಲಿಸಿರುತ್ತಾರೆ.

ಸಮಾಜದ ಅಂಕುಡೊಂಕು ತಿದ್ದುವುದು ಪತ್ರಕರ್ತರ ಮಹತ್ಕಾರ್ಯ: ಶಾಸಕ ಪಾಟೀಲ

ಉದಯಕಾಲ ನ್ಯೂಸ್

ಕುಂದಗೋಳ: ಪ್ರಜಾಪ್ರಭುತ್ವದ ನಾಲ್ಕನೆಯ ಅಂಗವಾದ ಪತ್ರಿಕಾರಂಗವು ಸಮಾಜಕ್ಕಾಗಿ ಹೆಚ್ಚಿನ ಸಮಯ ಮೀಸಲಿಟ್ಟು, ಅಂಕುಡೊಂಕು ತಿದ್ದುವ ಮಹಾತ್ಕಾರ್ಯದಲ್ಲಿ ಪತ್ರಕರ್ತರ ಪರಿಶ್ರಮದ ಕಾಯಕವಾಗಿದೆ ಎಂದು ಶಾಸಕ ಎಮ್.ಆರ್.ಪಾಟೀಲ ಹೇಳಿದರು.

ಅವರು ಪಟ್ಟಣದ ಬಸವೇಶ್ವರ ಶಿಕ್ಷಣ ಸಂಸ್ಥೆಯ ಸನ್‌ಶೈನ್ ಶಾಲೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘದಿಂದ ನಡೆದ ಪತ್ರಿಕಾ ದಿನಾಚರಣೆ ಹಾಗೂ ಪ್ರತಿಭಾವಂತ ವಿಧ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಬುಧವಾರ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕ ಹೊನ್ನಪ್ಪ ಕರೆಕನ್ನಮ್ಮನವರ ಉಪನ್ಯಾಸ ನೀಡಿದರು. ಕಸಾಪ ತಾಲೂಕಾ ಅಧ್ಯಕ್ಷ ಪ್ರಭುಗೌಡ

ಸಂಕಾಗೌಡಶಾನಿ, ಕೃಷಿಕ ಸಮಾಜ ನವದಹೆಲಿ ರಾಜ್ಯಾಧ್ಯಕ್ಷರಾದ ಮಾಣಿಕ್ಯ ಚಿಲ್ಲೂರ,

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ ಸಂಘದ ಅಧ್ಯಕ್ಷ ಬಸವರಾಜ ಗುಡ್ಡದಕೇರಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸನ್ ಶೈನ್ ಶಾಲೆಯ 2023-24ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಾದ ಪ್ರಿಯಾಂಕ ಎಸ್ ಕನಕಣ್ಣವರ, ಲಕ್ಷ್ಮೀ ಬೆಟದೂರ, ಮಹಾಲಕ್ಷ್ಮೀ ಕೆಳಗಿನಮನಿ ಈ ವಿಧ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಬಸವೇಶ್ವರ ಶಿಕ್ಷಣ ಸಮಿತಿಯ ಅಧ್ಯಕ್ಷ ಬಸವರಾಜ ಕೊಪ್ಪದ, ಬಿಜೆಪಿ ಮುಖಂಡ ಮಾಲತೇಶ ಶ್ಯಾಗೋಟಿ,ಕರವೇ ತಾಲೂಕು ಅಧ್ಯಕ್ಷ ಕಲ್ಲಪ್ಪ ಹರಕುಣಿ, ಕರವೇ ಪ್ರವೀಣಶೆಟ್ಟಿ ಬಣದ ಅಧ್ಯಕ್ಷ ರಮೇಶ ಇಂಗಳಹಳ್ಳಿ, ಮಕ್ಕಳ ಸಾಹಿತ್ಯ ಪರಿಷತ ಅಧ್ಯಕ್ಷ ಲೋಕೇಶ ಸರಾವರಿ,ಹಾಗೂ ಬಿ.ಟಿ.ಗಂಗಾಯಿ,ಬಸವರಾಜ ಬಾಳಿಕಾಯಿ, ಶಿವಪ್ಪ ಗಂಗಾಯಿ,ಉಮೇಶ ಬೀಡನಾಳ,ಪತ್ರಕರ್ತರಾದ ಸುನೀಲ ಕರೋಗಲ್,ನಾಗರಾಜ ಮುದಬಾವಿ,ವಾಯ್,ಡಿ ಹೊಸೂರ, ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಮ್.ಬಡಿಗೇರ, ಶಿಕ್ಷಕ ಬಸವರಾಜ ಕುಂದಗೋಳ, ಮಂಜುನಾಥ ನೆರ್ತಿ ಮತ್ತಿತರರಿದ್ದರು.

ಇಂದಿರಾ ಕ್ಯಾಂಟೀನ್‌ಗಳು ಯಾವುದೇ ಕಾರಣಕ್ಕೂ ಸ್ಥಗಿತಗೊಳ್ಳುವುದಿಲ್ಲ

ಬ್ಯಾಡಗಿ: ರಾಜ್ಯದ ಬಡವರ ಪಾಲಿಗೆ ಅನ್ನದಾತವಾಗಿರುವ ಇಂದಿರಾ ಕ್ಯಾಂಟೀನ್‌ಗಳು ಯಾವುದೆ ಕಾರಣಕ್ಕೂ ಸ್ಥಗಿತಗೊಳ್ಳುವುದಿಲ್ಲ. ಸರ್ಕಾರಕ್ಕೆ ಹೊರೆಯಾದರೂ ಜನಪರ ಕಾರ್ಯಕ್ರಮಗಳು ಜಾರಿಯಲ್ಲಿರುತ್ತವೆ ಎಂದು ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ಪಟ್ಟಣದ ಜಿಲ್ಲಾ ಪಂಚಾಯತಿ ಇಂಜಿನೀಯರಿಂಗ್ ಕಾರ್ಯಾಲಯ ಬಳಿ ನೂತನವಾಗಿ ನಿರ್ಮಿಸುತ್ತಿರುವ ಇಂದಿರಾ ಕ್ಯಾಂಟೀನ್ ಕಟ್ಟಡದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಬಡವರ ಬಾಳು ಹಸನನಾಗಬೇಕು, ರಾಜ್ಯದ ಪ್ರತಿಯೊಬ್ಬರು ಹಸಿವಿನಿಂದ ಬಳಲಬಾರದು, ಆರ್ಥಿಕವಾಗಿ ಶಕ್ತರಾಗಬೇಕೆಂಬ ಉದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅನ್ನಭಾಗ್ಯ ಸೇರಿದಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಆದರೆ ವಿಪಕ್ಷಗಳ ಮಾತಿಗೆ ನಾವು ಮನ್ನಣೆ ನೀಡದೆ, ನಮ್ಮ ಸರ್ಕಾರದ ಕಾರ್ಯಕ್ರಮಗಳನ್ನು ಯಥಾಪ್ರಕಾರ ಮುಂದುವರೆಸುತ್ತೇವೆ. ಬಡವರು, ಹಿಂದುಳಿದವರು ಸೇರಿದಂತೆ ಜನಸಾಮಾನ್ಯರ ಜೀವನಮಟ್ಟ ಸುಧಾರಿಸಬೇಕಿದೆ. ನೈಜ ಬಡಕುಟುಂಬಗಳಿಗೆ ಸರ್ಕಾರದ ಯೋಜನೆಗಳತಲುಪಿಸಬೇಕಿದ್ದು, ಸರ್ಕಾರ ಇಂತಹ ಯೋಜನೆ ಜಾರಿಗೊಳಿಸಿದೆ ಎಂದರು.

ತಾಲೂಕಿನ ಕೆರೆಗಳ ಭರ್ತಿ: ತಾಲೂ